# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ) ರವರ ಕಛೇರಿ, ಎನ್.ಆರ್.ವೃತ್ತ, ಬೆಂಗಳೂರು –02.**

ಸಂಖ್ಯೆ: ಜಂನಿನಯೋ (ದ)/ಪ್ರಾ.ಪ/ಸನಿ/03/2021-22 ದಿನಾಂಕ: 27-07-2021.

Joint Director (Building License (S) (ulth))

## ಪ್ರಾರಂಭಿಕ ಪ್ರಮಾಣ ಪತ್ರ

**ವಿಷಯ:** ಸಂಖ್ಯೆ: 01/1, ಪಿ.ಐ.ಡಿ ಸಂಖ್ಯೆ 31-42-1/1, ಹೊಸಕೆರೆ ರಸ್ತೆ, ಬಿನ್ನಿಪೇಟೆ, ಚಿಕ್ಕಪೇಟೆ ವಲಯ, ವಾರ್ಡ್ ಸಂಖ್ಯೆ 121, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಫೇಸ್–2 ಟವರ್ – 07 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ಅರ್ಜಿದಾರರ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿರುವ ಮನವಿ ದಿನಾಂಕ: 14-06-2021.

2) ಮರು ಪರಿಷ್ಕೃತ ನಕ್ಷೆ ಮಂಜೂರಾತಿ ಸಂಖ್ಯೆ: JDTP (S) / LP 31/10-11 ದಿ: 18-09-2015.

3) ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ದಿನಾಂಕ: 20-07-2021.

*****

ಉಲ್ಲೇಖ (2) ರನ್ವಯ ಸ್ವತ್ತಿನ ಸಂಖ್ಯೆ 01/1, ಪಿ.ಐ.ಡಿ ಸಂಖ್ಯೆ 31-42-1/1, ಹೊಸಕೆರೆ ರಸ್ತೆ, ಬಿನ್ನಿಪೇಟೆ, ಚಿಕ್ಕಪೇಟೆ ವಲಯ, ವಾರ್ಡ್ ಸಂಖ್ಯೆ 121, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ Phase-2 ರಲ್ಲಿನ ಟವರ್-05 ರಲ್ಲಿ ಫೇಸ್ I = ಟವರ್ 1, 2 ಮತ್ತು 3 ರಲ್ಲಿ 2ತಳ+ನೆಲ +ಮೇಲಿನ 18 ಅಂತಸ್ತುಗಳು, ಫೇಸ್ II = ಟವರ್ 4 ರಲ್ಲಿ 2ತಳ+ನೆಲ+ಮೇಲಿನ 31 ಅಂತಸ್ತುಗಳು ಮತ್ತು ಟವರ್ 5 ಮತ್ತು 6 ರಲ್ಲಿ 2ತಳ+ನೆಲ+ಮೇಲಿನ 32 ಅಂತಸ್ತುಗಳು, ಟವರ್ 7 ರಲ್ಲಿ ತಳ+ನೆಲ+ಮೇಲಿನ 24 ಅಂತಸ್ತುಗಳ 423 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕಛೇರಿಯಿಂದ JDTP (S) / LP 31/10-11 ದಿನಾಂಕ: 18-09-2015 ರಂದು ಮರು ಪರಿಷ್ಕೃತ ನಕ್ಷೆ ಮಂಜೂರಾತಿ ನೀಡಲಾಗಿದೆ. ಫೇಸ್–2 ಟವರ್ – 06 ರ ವಸತಿ ಸಮುಚ್ಚಯ ಕಟ್ಟಡಕ್ಕೆ ದಿನಾಂಕ: 04–09–2018 ರಂದು ಪ್ರಾರಂಭಿಕ ಪ್ರಮಾಣ ಪತ್ರ ನೀಡಲಾಗಿರುತ್ತದೆ.

ಉಲ್ಲೇಖ (1) ರ ಮನವಿಗೆ ಸಂಬಂಧಿಸಿದಂತೆ, ಫೇಸ್–2 ಟವರ್ – 07 ರ 182 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ದಿನಾಂಕ: 23-06-2021 ರಂದು ಸ್ಥಳ ಪರಿಶೀಲಿಸಲಾಗಿ ಮಂಜೂರಾತಿ ನಕ್ಷೆಯನ್ವಯ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ನಿರ್ಮಿಸಿದ್ದು, ಸದರಿ ಪ್ರಸ್ತಾವನೆಗೆ ಉಲ್ಲೇಖ (3) ರಂತೆ ಅಪರ ನಿರ್ದೇಶಕರು, ನಗರ ಯೋಜನೆ ರವರು ಅನುಮೋದನೆ ನೀಡಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 2,80,000/–ಗಳನ್ನು ಅರ್ಜಿದಾರರಿಂದ ರಸೀದಿ ಸಂಖ್ಯೆ: RE-ifms624-TP/000018 ದಿನಾಂಕ: 27-07-2021 ರಂದು ಸಂದಾಯಿಸಿಕೊಳ್ಳಲಾಗಿದೆ. ಆದುದರಿಂದ ಫೇಸ್–2 ಟವರ್ – 07 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.

27/7/2021

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



27/07 27/07 27/07/2021

2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

4) ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

5) ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ರಂತೆ ನಿರ್ವಹಿಸುವುದು.

6) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಒಳಸಿಕೊಳ್ಳುವುದು.

7) ನಿವೇಶನದ ಖಾತಾ ವಿಭಜನೆ, ದಾಖಲಾತಿಗಳನ್ನು ಅಥವಾ ವಾಸ್ತವಾಂಶ ಮರೆಮಾಚಿದಲ್ಲಿ ಅರ್ಜಿದಾರರು ಹಾಗೂ ಶಿಫಾರಸ್ಸು ಮಾಡಿರುವ ಅಧಿಕಾರಿಗಳು ನೇರ ಹೊಣೆಯಾಗಿರುತ್ತಾರೆ ಮತ್ತು ನೀಡಲಾದ ಕಟ್ಟಡ ನಕ್ಷೆ ಮಂಜೂರಾತಿಯು ತನ್ನಿಂದತಾನೇ ರದ್ದುಗೊಳ್ಳುತ್ತದೆ.

8) ಅರ್ಜಿದಾರರು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

9) ಅರ್ಜಿದಾರರು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

ಸಹಿ/-
ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ

M/s. Relationship Properties Pvt. Ltd.,
# 1/1, Binny Mill Road
Binnypet
Bangalore – 560 023.

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಚಿಕ್ಕಪೇಟೆ ಉಪ ವಿಭಾಗ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

27/7/2021

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

27/07 27/07 27/07/2021